# ನಾಳೆಯಿಂದ ಎನ್ಐಟಿಕೆ ಸಾಂಸ್ಕೃತಿಕ ಉತ್ಸವ

**ಮಂಗಳೂರು:** ಸುರತ್ಕಲ್‌ನ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಎನ್ಐಟಿಕೆ)ಯ ವಾರ್ಷಿಕ ಸಾಂಸ್ಕೃತಿಕ ಉತ್ಸವ 'ಇನ್ಸಿಡೆಂಟ್ 2023' ಮಾ.16ರಿಂದ 19ರವರೆಗೆ ಎನ್ಐಟಿಕೆಯಲ್ಲಿ ನಡೆಯಲಿದೆ. ಸುದ್ದಿಗೋಷ್ಠಿಯಲ್ಲಿ ಉತ್ಸವದ ಬಗ್ಗೆ ಮಾಹಿತಿ ನೀಡಿದ ಎನ್ಐಟಿಕೆ ವಿದ್ಯಾರ್ಥಿ ಕ್ಷೇಮಪಾಲನಾ ಡೀನ್ ಪ್ರೊ. ನರೇಂದ್ರನಾಥ್, ಮಾ.16ರಂದು ಸಂಜೆ 6ಕ್ಕೆ ಉದ್ಘಾಟನಾ ಸಮಾರಂಭ ನಡೆಯಲಿದೆ. ನಟ ಪ್ರಕಾಶ್ ಬೆಳವಾಡಿ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಶಾಂತ್ ಎ. ತಿಮ್ಮಯ್ಯ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ತುಳಸಿ ಗೌಡ ಭಾಗವಹಿಸುವರು. ಎನ್ಐಟಿಕೆ ಸುರತ್ಕಲ್ ಪ್ರಭಾರ ನಿರ್ದೇಶಕ ಪ್ರೊ. ಪ್ರಸಾದ್ ಕೃಷ್ಣ ಅಧ್ಯಕ್ಷತೆ ವಹಿಸುವರು ಎಂದರು. ಬಳಿಕ ಹಾಸ್ಯ ಕಲಾವಿದೆ ಗುರ್ಲೀನ್ ಪನ್ನು ಅವರಿಂದ ಸ್ಟ್ಯಾಂಡ್‌ಅಪ್ ಕಾಮಿಡಿ ಶೋ ನಡೆಯಲಿದೆ. ಮಾ.17ರಂದು 'ಇನ್ ಟಾಕ್ಸ್' ಕಾರ್ಯಕ್ರಮದಲ್ಲಿ ಬೆಂಗಳೂರಿನ ಮಾಜಿ ಪೊಲೀಸ್ ಕಮಿಷನರ್ ಶಂಕರ್ ಬಿದರಿ, ಅರಕಾನಟ್ ಸಂಸ್ಥಾಪಕ ನಿವೇದನ್ ನೆಂಪೆ ಭಾಷಣ ಮಾಡುವರು. ಇನ್ಸಿಡೆಂಟ್ 2023ರಲ್ಲಿ 50ಕ್ಕೂ ಹೆಚ್ಚು ಸ್ಪರ್ಧೆ ಏರ್ಪಡಿಸಲಾಗಿದೆ. 200ಕ್ಕೂ ಹೆಚ್ಚು ಕಾಲೇಜುಗಳಿಂದ ಸ್ಪರ್ಧಿಗಳು ಭಾಗವಹಿಸುವರು ಎಂದರು. ಎನ್ಐಟಿಕೆ ಸ್ಟೂಡೆಂಟ್ ಆ್ಯಕ್ಟಿವಿಟಿ ಮತ್ತು ಕ್ರೀಡಾ ಅಧಿಕಾರಿ ಡಾ. ಮನೋಜ್, ಪಿಆರ್‌ಒ ವೈಷ್ಣವಿ, ಇನ್ಸಿಡೆಂಟ್ ಸಂಚಾಲಕ ಸೂರ್ಯಕೌಶಿಕ್ ಬಿ.ಎನ್. ಇದ್ದರು.

Kannada Prabha Date: 15/03/23 p, no - 03